# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಸುಪ್ರಿಯಾ ಪ್ರಲ್ಹಾದ ಕಡೋಲೆ, ಅಧ್ಯಕ್ಷರು, ಭೋಜ ಗ್ರಾಮ ಪಂಚಾಯಿತಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ ರವರ ವಿರುದ್ಧ ಕ್ರಮ ಕೈಗೊಳ್ಳುವ ಕುರಿತು – ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018, ದಿನಾಂಕ: 02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಳಗಾವಿ ಜಿಲ್ಲೆ ಪತ್ರ ಸಂಖ್ಯೆ: ಜಿಪಂಬೆ/ಪರಿಷತ್/ವಿವ/ನೇರ/2018–19, ದಿನಾಂಕ:13.06.2019.
3. ಪ್ರಾದೇಶಿಕರ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರ ಪತ್ರ ಸಂಖ್ಯೆ: ಪ್ರಾಆಕ/ಅಭಿವೃದ್ಧಿ/ಸಿಆರ್/30/2019–20, ದಿನಾಂಕ:21.01.2020.

**ಪ್ರಸ್ತಾವನೆ:**

ಶ್ರೀಮತಿ ಸುಪ್ರಿಯಾ ಪ್ರಲ್ಹಾದ ಕಡೋಲೆ, ಅಧ್ಯಕ್ಷರು, ಭೋಜ ಗ್ರಾಮ ಪಂಚಾಯಿತಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ ರವರು ಭೋಜ ಗ್ರಾಮ ಪಂಚಾಯಿತಿಯಲ್ಲಿ ಮಾಡಿರುವ ಅವ್ಯವಹಾರಗಳ ಬಗ್ಗೆ ಉಲ್ಲೇಖ (1) ಮತ್ತು (2) ರ ಆದೇಶಗಳ ಸೂಚನೆಯಂತೆ ವಿಚಾರಣೆ ನಡೆಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಳಗಾವಿ ಜಿಲ್ಲೆ ರವರಿಗೆ ನಿರ್ದೇಶನ ನೀಡಲಾಗಿತ್ತು. ಅದರಂತೆ ಆರೋಪಿತ ಅಧ್ಯಕ್ಷರ ವಿರುದ್ಧ ಇದಂತಹ ಆರೋಪಗಳ ಬಗ್ಗೆ ವಿಚಾರಣೆ ಮಾಡಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ಅಧಿನಿಯಮ 1993 ರ ಪ್ರಕರಣ 48(4) ಮತ್ತು 48(5) ರನ್ವಯ ಕ್ರಮ ಜರುಗಿಸುವಂತೆ ಮೇಲೆ ಓದಲಾದ (3) ರ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ (3) ರಲ್ಲಿ ಓದಲಾದ ಪತ್ರದಲ್ಲಿ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ ಹಾಗೂ ವಿಚಾರಣಾಧಿಕಾರಿಗಳು ರವರು ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕು, ಭೋಜ ಗ್ರಾಮ ಪಂಚಾಯಿತಿಯಲ್ಲಿ ಮೇಲ್ಕಂಡ ಆರೋಪದ ಹಿನ್ನೆಲೆಯಲ್ಲಿ ದಿನಾಂಕ:22.11.2019 ರಂದು ವಿಚಾರಣೆಗೆ ಕರೆಯಲಾಗಿದ್ದು, ಎದುರುದಾರರು ಗೈರು ಹಾಜರಾಗಿರುತ್ತಾರೆ. ಪುನ: ಪ್ರಕರಣವನ್ನು ದಿನಾಂಕ:09.01.2020 ಕ್ಕೆ ಮುಂದೂಡಿ ತಿಳುವಳಿಕೆ ಪತ್ರವನ್ನು ಎದುರುದಾರರಿಗೆ ಜಾರಿಗೊಳಿಸಲಾಗಿದ್ದು, ಆದಾಗ್ಯೂ ಸಹ ಪ್ರಕರಣದ ವಿಚಾರಣೆಗೆ ಉದ್ದೇಶ ಪೂರ್ವಕವಾಗಿ ಗೈರು ಹಾಜರಾಗಿರುವುದನ್ನು ಹಾಗೂ ಅವರ ಪರವಾಗಿ ಯಾರು ಹಾಜರಾಗದಿರುವುದನ್ನು ಗಮನಿಸಲಾಗಿದೆ. ಪ್ರಕರಣದಲ್ಲಿ ಲಭ್ಯವಿರುವ ದಾಖಲೆಗಳನ್ನು ಪರಿಶೀಲಿಸಲಾಗಿ, ಎದುರುದಾರರು ಹಾಗೂ ಹಿಂದಿನ ಪಂ.ಅ.ಅ.ಯು ಸರ್ಕಾರದ ಕಂದಾಯ ಜಮೀನಿನ ಅತಿಕ್ರಮಣವನ್ನು ಕ್ರಮಬದ್ಧಗೊಳಿಸಲು ಪ್ರಯತ್ನಿಸಿರುವುದು ದಾಖಲೆಗಳಿಂದ ಕಂಡು ಬರುತ್ತದೆ. ಸದರಿ ಪ್ರಕರಣದಲ್ಲಾದ ಸರ್ಕಾರಿ ಜಾಗೆಯ ಅತಿಕ್ರಮಣವನ್ನು ತೆರವುಗೊಳಿಸಲು ತಹಶೀಲ್ದಾರ, ಚಿಕ್ಕೋಡಿ ಇವರು ಅದೇಶಿಸಿರುತ್ತಾರೆ ಹಾಗೂ ಈ ಕಾರ್ಯಾಲಯದಲ್ಲಿ ಪ್ರಕರಣವು ವಿಚಾರಣೆ ಹಂತದಲ್ಲಿದ್ದ ಅವಧಿಯಲ್ಲಿ ಪ್ರಕರಣಕ್ಕೆ ಸಂಬಂಧಿಸಿದಂತೆ ಪಂ.ಅ.ಅ. ಮತ್ತು ಎದುರುದಾರರ ಮೇಲೆ ದಿನಾಂಕ:20.12.2019 ರಂದು ಸದಲಗಾ ಪೋಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ:0126/2019 ರಡಿ ಎಫ್.ಐ.ಆರ್. ಅನ್ನು ದಾಖಲಿಸಲಾಗಿರುತ್ತದೆ.

ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಶ್ರೀಮತಿ ಸುಪ್ರಿಯಾ ಪ್ರಲ್ಹಾದ ಕಡೋಲೆ, ಅಧ್ಯಕ್ಷ ರವರು ಮಾನ್ಯ ಉಚ್ಚ ನ್ಯಾಯಾಲಯ ಧಾರವಾಡ ಪೀಠದಲ್ಲಿ ರಿಟ್ ಅರ್ಜಿ ಸಂಖ್ಯೆ: 116518/2019 ಅನ್ನು ದಾಖಲಿಸಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಜರುಗಿಸಲಾಗುತ್ತಿರುವ ವಿಚಾರಣೆಗೆ ಮಧ್ಯಾಂತರ ತಡೆಯಾಜ್ಞೆ ನೀಡುವಂತೆ ಪ್ರಾರ್ಥಿಸಿರುತ್ತಾರೆ. ಆದರೆ ಮು.ಕಾ.ನಿ.ಅ. ಜಿ.ಪಂ. ಬೆಳಗಾವಿ ಜಿಲ್ಲೆ ರವರ ಟಿಪ್ಪಣಿ ಸಂಖ್ಯೆ: ಜಿಪ/ಅಭಿವೃದ್ಧಿ/ಪಂಅಅ/ವಿವ–2019–20, ದಿನಾಂಕ:06.11.2019 ರನ್ವಯ ಮಾಡಿದ ಆದೇಶದಲ್ಲಿ ರೂ.1,35,000/–ಗಳನ್ನು ವಸೂಲಾತಿಯನ್ನು ಮಾಡುವುದಕ್ಕೆ ಮಾತ್ರ ತಡೆಯಾಜ್ಞೆಯನ್ನು ನೀಡಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಜರುಗಿಸಬೇಕಾದ ವಿಚಾರಣೆಗೆ ಯಾವುದೇ ತಡೆಯಾಜ್ಞೆ ನೀಡಿರುವುದಿಲ್ಲ. ಆದ್ದರಿಂದ ಮು.ಕಾ.ನಿ.ಅ. ಜಿ.ಪಂ. ಬೆಳಗಾವಿ ಜಿಲ್ಲೆ ರವರ ಶಿಫಾರಸ್ಸಿನಂತೆ ಅಧಿಕಾರವನ್ನು ದುರುಪಯೋಗ ಪಡಿಸಿಕೊಂಡು ದುರ್ನಡತೆ ತೋರಿರುವುದು ಅನುಮಾನವನ್ನು ಮೀರಿ

ಸಾಬೀತಾಗಿರುತ್ತದೆ. ಆದ್ದರಿಂದ ಎದುರುದಾರರಾದ ಶ್ರೀಮತಿ ಸುಪ್ರಿಯಾ ಪ್ರಲ್ಹಾದ ಕಡೋಲೆ, ಅಧ್ಯಕ್ಷರು, ಭೋಜ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಮತ್ತು ಸದಸ್ಯತ್ವ ಸ್ಥಾನವನ್ನು ರದ್ದುಗೊಳಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಹಾಗೂ 48(4) ರನ್ವಯ ಸದಸ್ಯತ್ವ ರದ್ದುಗೊಳಿಸಲು ಬೆಳಗಾವಿ ವಿಭಾಗ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ರವರು ಕೋರಿರುತ್ತಾರೆ.

ಪ್ರಸ್ತಾವನೆ ಪರಿಶೀಲಿಸಿದೆ. ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ ರವರ ವಿಚಾರಣಾ ವರದಿಯಲ್ಲಿ ಲಭ್ಯವಿರುವ ದಾಖಲೆಗಳ ಆಧಾರದ ಮೇಲೆ ಶ್ರೀಮತಿ ಸುಪ್ರಿಯಾ ಪ್ರಲ್ಹಾದ ಕಡೋಲೆ, ಅಧ್ಯಕ್ಷರು, ಭೋಜ ಗ್ರಾಮ ಪಂಚಾಯಿತಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ ರವರು ತಮ್ಮ ಅಧಿಕಾರವನ್ನು ದುರುಪಯೋಗ ಪಡಿಸಿಕೊಂಡು ದುರ್ನಡತೆ ತೋರಿರುವುದು ಅನುಮಾನವನ್ನು ಮೀರಿ ಸಾಬೀತಾಗಿರುವುದರಿಂದ ಶ್ರೀಮತಿ ಸುಪ್ರಿಯಾ ಪ್ರಲ್ಹಾದ ಕಡೋಲೆ, ಅಧ್ಯಕ್ಷರು, ಗ್ರಾಮ ಪಂಚಾಯಿತಿ ಭೋಜ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ಮತ್ತು 48(5) ರನ್ವಯ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವದಿಂದ ತೆಗೆದುಹಾಕಬಹುದು.

ಮುಂದುವರೆದು, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ಸರ್ಕಾರದ ಕಂದಾಯ ಜಮೀನಿನ ಅತಿಕ್ರಮಣವನ್ನು ಕ್ರಮಬದ್ಧಗೊಳಿಸಲು ಪ್ರಯತ್ನಿಸಿರುವುದು ದಾಖಲೆಗಳಿಂದ ತಿಳಿದುಬಂದಿರುವುದರಿಂದ ಸದರಿ ನೌಕರರ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಳಗಾವಿ ಜಿಲ್ಲೆ ರವರಿಗೆ ಸೂಚಿಸಲು ಸರ್ಕಾರವು ತೀರ್ಮಾನಿಸಿದೆ.

ಅದರಂತೆ, ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/121/ಗ್ರಾಪಂಅ/2020**
**ಬೆಂಗಳೂರು, ದಿನಾಂಕ:09-03-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಸುಪ್ರಿಯಾ ಪ್ರಲ್ಹಾದ ಕಡೋಲೆ, ಅಧ್ಯಕ್ಷರು, ಭೋಜ ಗ್ರಾಮ ಪಂಚಾಯಿತಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ಮತ್ತು 48(5) ರನ್ವಯ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಿದೆ ಮತ್ತು ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಳಗಾವಿ ಜಿಲ್ಲೆ ರವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 9/3/2020
(ನವೀನ್‌ಕುಮಾರ್ ಬಿ.)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

9.3.2020

1) ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಳಗಾವಿ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಚಿಕ್ಕೋಡಿ, ಬೆಳಗಾವಿ ಜಿಲ್ಲೆ.
4) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಭೋಜ ಗ್ರಾಮ ಪಂಚಾಯಿತಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ.
5) ಸಂಬಂಧಿಸಿದವರಿಗೆ (ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಚಿಕ್ಕೋಡಿ, ಬೆಳಗಾವಿ ಜಿಲ್ಲೆ ರವರ ಮುಖಾಂತರ)
6) ಗಣಕ ಕೋಶ.
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.